ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 23/12/2019

# ಸೇವೆಗೆ ಪುನರ್ ನೇಮಕ ಮಾಡಿಕೊಳ್ಳಲು ಮನವಿ

ಉದಯ 23/12/19

ಬೆಂಗಳೂರು: ಸೇವೆಗೆ ಮರು ನೇಮಕ ಮಾಡಿಕೊಳ್ಳುವಂತೆ ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಅಮಾನತು ಗೊಂಡಿರುವ ಎಸ್.ಮೂರ್ತಿಯವರು ಮುಖ್ಯಮಂತ್ರಿ ನೇತೃತ್ವದ ಕರ್ನಾಟಕ ವಿಧಾನಸಭೆ ಸಚಿವಾಲಯದ ವಿಶೇಷ ಮಂಡಳಿಗೆ ಮನವಿ ಮಾಡಿದ್ದಾರೆ. ಅಮಾನತು ಆದೇಶಕ್ಕೆ ತಡೆ ನೀಡಬೇಕೆಂದು ಕೋರಿ ಸಲ್ಲಿಸಿದ್ದ ಮೇಲ್ಮನವಿಯನ್ನು ವಜಾಗೊಳಿಸಿ. ಆದರೆ, ಇಲಾಖಾ ವಿಚಾರಣೆ ಆರಂಭಿಸದೆ ಮೇಲ್ಮನವಿದಾರರನ್ನು ಸುದೀರ್ಘ ಅವಧಿವರೆಗೆ ಅಮಾನತಿನಲ್ಲಿ ಇಡುವಂತಿಲ್ಲ ಎಂದು ಹೈಕೋರ್ಟ್ ಆದೇಶದಲ್ಲಿ ಹೇಳಿರುವುದನ್ನು ಉಲ್ಲೇಖಿಸಿ ಮೂರ್ತಿ ಮನವಿ ಸಲ್ಲಿಸಿದ್ದಾರೆ. ಅವ್ಯವಹಾರ, ಅಧಿಕಾರ ದುರುಪಯೋಗ ಆರೋಪದ ಹಿನ್ನೆಲೆಯಲ್ಲಿ ಎಸ್.ಮೂರ್ತಿ ಅವರನ್ನು ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಅಮಾನತುಗೊಳಿಸಿ, 2018ರ ಡಿ.27ರಂದು ಆದೇಶ ಹೊರಡಿಸಲಾಗಿತ್ತು.